ಉಳಿದ 6 ಕಿ.ಮೀ. ಉದ್ದದ ರಸ್ತೆಯನ್ನು ಕೇಂದ್ರ ರಸ್ತೆ ನಿಧಿ ಅಡಿಯಲ್ಲಿ ರೂ. 200.00 ಲಕ್ಷಗಳ ಅಂದಾಜು ಮೊತ್ತದಲ್ಲಿ ಕೈಗೊಂಡು ಭೌತಿಕವಾಗಿ ಪೂರ್ಣಗೊಳಿಸಲಾಗಿದೆ.

ಪಶು ವೈದ್ಯಾಧಿಕಾರಿಗಳು ಮತ್ತು ಸಿಬ್ಬಂದಿಗಳು ಇಲ್ಲದೇ ತೊಂದರೆಯಾಗಿರುವುದು

281 (291) ಶ್ರೀ ಸಂಪಂಗಿ ಎನ್. (ಬಾಗೇಪಲ್ಲಿ): ಮಾನ್ಯ ಲೋಕಶಿಕ್ಷಣ, ಸಾರ್ವಜನಿಕ ಗ್ರಂಥಾಲಯ, ಸಣ್ಣ ಉಳಿತಾಯ ಹಾಗೂ ಲಾಟರಿ ಮತ್ತು ಪಶುಸಂಗೋಪನಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿನ ಬಾಗೇಪಲ್ಲಿ ಗುಡಿಬಂಡೆ ತಾಲ್ಲೂಕುಗಳಲ್ಲಿ ಪಶು ಆಸ್ಪತ್ರೆ ಪಶು ಚಿಕಿತ್ಸಾಲಯಗಳಲ್ಲಿ ಪಶು ವೈದ್ಯರು ಇತರೇ ಸಿಬ್ಬಂದಿಗಳು ಇಲ್ಲದೇ ಜಾನುವಾರುಗಳ ಚಿಕಿತ್ಸೆಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

ಆ) ಹಾಗಿದ್ದಲ್ಲಿ, ಸದರಿ ಹುದ್ದೆಗಳ ಭರ್ತಿಗೆ ಕೈಗೊಂಡಿರುವ ಕ್ರಮವೇನು ;

ಇ) ಪಶು ವೈದ್ಯಾಧಿಕಾರಿಗಳಿಗೆ, ಸಿಬ್ಬಂದಿಗಳಿಗೆ ವಸತಿ ಗೃಹಗಳು ಇಲ್ಲದೇ ತೊಂದರೆಯಾಗಿರುವುದು ನಿಜವಲ್ಲವೇ ;

ಈ) ಹಾಗಿದ್ದಲ್ಲಿ, ಸಮಸ್ಯೆ ನಿವಾರಣೆಗೆ ಸರ್ಕಾರವು ಕೈಗೊಳ್ಳುವ ಕ್ರಮವೇನು ;

ಉ) ಬಾಗೇಪಲ್ಲಿ ಗುಡಿಬಂಡೆ ತಾಲ್ಲೂಕುಗಳಲ್ಲಿ ವಿವಿಧ ಜಾನುವಾರುಗಳ ಸಂಖ್ಯೆ ಎಷ್ಟು ; ಈ ಜಾನುವಾರುಗಳಿಗೆ ಜೀವ ವಿಮೆಯನ್ನು ಮಾಡಿಸಲಾಗಿದೆಯೇ ;

ಊ) ಹಾಗಿದ್ದಲ್ಲಿ, ಜೀವವಿಮೆ ಮಾಡಿಸಲಾದ ಜಾನುವಾರುಗಳೆಷ್ಟು ; (ವಿವರ ಒದಗಿಸುವುದು) ?

ಶ್ರೀ ರೇವುನಾಯಕ್ ಬೆಳಮಗಿ (ಲೋಕಶಿಕ್ಷಣ, ಸಾರ್ವಜನಿಕ ಗ್ರಂಥಾಲಯ, ಸಣ್ಣ ಉಳಿತಾಯ ಹಾಗೂ ಲಾಟರಿ ಮತ್ತು ಪಶುಸಂಗೋಪನಾ ಸಚಿವರು):

ಅ) ಹೌದು.

ಆ) ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿನ ಬಾಗೇಪಲ್ಲಿ ಗುಡಿಬಂಡೆ ತಾಲ್ಲೂಕುಗಳಲ್ಲಿ ಖಾಲಿ ಇರುವ ಹುದ್ದೆಗಳ ವಿವರ ಕೆಳಕಂಡಂತಿದೆ:

ಹುದ್ದೆ	ಬಾಗೇಪಲ್ಲಿ ತಾಲ್ಲೂಕು	ಗುಡಿಬಂಡೆ ತಾಲ್ಲೂಕು
ಪಶುವೈದ್ಯಾಧಿಕಾರಿ	3	0
ಪಶು ವೈದ್ಯಕೀಯ ಮೇಲ್ವಿಚಾರಕರು	0	1
ಹಿರಿಯ ಪಶುವೈದ್ಯಕೀಯ ಪರೀಕ್ಷಕರು	0	1
ಪಶುವೈದ್ಯಕೀಯ ಪರೀಕ್ಷಕರು	6	1
ಪಶು ವೈದ್ಯಕೀಯ ಸಹಾಯಕರು	0	5
ವಾಹನ ಚಾಲಕರು	1	0
'ಡಿ' ದರ್ಜೆ ನೌಕರರು	4	1
ಒಟ್ಟು	**14**	**9**

ಮೇಲ್ಕಂಡ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಈ ಕೆಳಕಂಡಂತೆ ಕ್ರಮ ತೆಗೆದುಕೊಳ್ಳಲಾಗುವುದು.

1. **ಪಶುವೈದ್ಯಾಧಿಕಾರಿ:** 276 ಪಶು ವೈದ್ಯಾಧಿಕಾರಿ ಹುದ್ದೆಗಳನ್ನು ವಿಶೇಷ ನೇಮಕಾತಿಯಡಿ ಭರ್ತಿ ಮಾಡುವ ಪ್ರಕ್ರಿಯೆ ಜಾರಿಯಲ್ಲಿದೆ. ನೇಮಕಾತಿ ಸಂದರ್ಭದಲ್ಲಿ ಬಾಗೇಪಲ್ಲಿ

ತಾಲ್ಲೂಕಿನಲ್ಲಿ ಖಾಲಿ ಇರುವ ಪಶುವೈದ್ಯಾಧಿಕಾರಿ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುವುದು.

2. **ಪಶುವೈದ್ಯಕೀಯ ಮೇಲ್ವಿಚಾರಕ:** ಹಿರಿಯ ಪಶುವೈದ್ಯಕೀಯ ಪರೀಕ್ಷಕರ ಹುದ್ದೆಯಿಂದ ಪಶುವೈದ್ಯಕೀಯ ಮೇಲ್ವಿಚಾರಕರ ಹುದ್ದೆಗೆ ಮುಂಬಡ್ತಿ ನೀಡುವ ಸಮಯದಲ್ಲಿ, ಗುಡಿಬಂಡೆ ತಾಲ್ಲೂಕಿನಲ್ಲಿ ಖಾಲಿ ಇರುವ ಪಶುವೈದ್ಯಕೀಯ ಮೇಲ್ವಿಚಾರಕರ ಹುದ್ದೆಯನ್ನು ತುಂಬಲು ಕ್ರಮ ಕೈಗೊಳ್ಳಲಾಗುವುದು.

3. **ಹಿರಿಯ ಪಶುವೈದ್ಯಕೀಯ ಪರೀಕ್ಷಕ:** ಪಶುವೈದ್ಯಕೀಯ ಪರೀಕ್ಷಕರ ಹುದ್ದೆಯಿಂದ ಹಿರಿಯ ಪಶುವೈದ್ಯಕೀಯ ಪರೀಕ್ಷಕರಿಗೆ ಮುಂಬಡ್ತಿ ನೀಡುವಾಗ ಗುಡಿಬಂಡೆ ತಾಲ್ಲೂಕಿನಲ್ಲಿ ಖಾಲಿ ಇರುವ ಹಿರಿಯ ಪಶುವೈದ್ಯಕೀಯ ಪರೀಕ್ಷಕರ ಹುದ್ದೆಯನ್ನು ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುವುದು.

4. **ಪಶುವೈದ್ಯಕೀಯ ಪರೀಕ್ಷಕ:** ಪಶುವೈದ್ಯಕೀಯ ಸಹಾಯಕರ ಹುದ್ದೆಯಿಂದ ಪಶುವೈದ್ಯಕೀಯ ಪರೀಕ್ಷಕರ ಹುದ್ದೆಗೆ ಮುಂಬಡ್ತಿ ನೀಡುವ ಸಮಯದಲ್ಲಿ ಗುಡಿಬಂಡೆ ಮತ್ತು ಬಾಗೇಪಲ್ಲಿ ತಾಲ್ಲೂಕುಗಳಲ್ಲಿ ಖಾಲಿ ಇರುವ ಪಶುವೈದ್ಯಕೀಯ ಪರೀಕ್ಷಕರ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುವುದು.

5. **ಪಶುವೈದ್ಯಕೀಯ ಸಹಾಯಕ:** 642 ಪಶುವೈದ್ಯಕೀಯ ಸಹಾಯಕರ ಹುದ್ದೆಗಳನ್ನು ವಿಶೇಷ ನೇಮಕಾತಿ ನಿಯಮಗಳ ಮೂಲಕ ನೇಮಕಾತಿ ಮಾಡಿಕೊಳ್ಳುವ ಪ್ರಕ್ರಿಯೆ ಜಾರಿಯಲ್ಲಿದ್ದು, ನೇಮಕಾತಿ ಸಂದರ್ಭದಲ್ಲಿ ಗುಡಿಬಂಡೆ

ತಾಲ್ಲೂಕಿನಲ್ಲಿ ಖಾಲಿ ಇರುವ ಪಶುವೈದ್ಯಕೀಯ ಸಹಾಯಕರ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುವುದು.

6. **ವಾಹನ ಚಾಲಕ:** ಹೊರಗುತ್ತಿಗೆ ಆಧಾರದ ಮೇಲೆ ವಾಹನ ಚಾಲಕರನ್ನು ನೇಮಿಸಿಕೊಳ್ಳುವಾಗ ಹಾಗೂ 'ಡಿ' ದರ್ಜೆ ನೌಕರರಿಗೆ ವಾಹನ ಚಾಲಕರಾಗಿ ಮುಂಬಡ್ತಿ ನೀಡುವ ಸಮಯದಲ್ಲಿ ಗುಡಿಬಂಡೆ ತಾಲ್ಲೂಕಿನಲ್ಲಿ ಖಾಲಿ ಇರುವ ವಾಹನ ಚಾಲಕರ ಹುದ್ದೆಯನ್ನು ತುಂಬಲು ಕ್ರಮ ಕೈಗೊಳ್ಳಲಾಗುವುದು.

7. **'ಡಿ' ದರ್ಜೆ ನೌಕರ:** ಅನುಕಂಪದ ಆಧಾರದ ಮೇಲೆ ನೇಮಕಾತಿ ಮಾಡುವಾಗ ಹಾಗೂ ಬೇರೆ ಇಲಾಖೆಯಿಂದ ಮರುವಿನ್ಯಾಸ ಮಾಡುವ ಸಂದರ್ಭದಲ್ಲಿ ಗುಡಿಬಂಡೆ ಮತ್ತು ಬಾಗೇಪಲ್ಲಿ ತಾಲ್ಲೂಕುಗಳಲ್ಲಿ ಖಾಲಿ ಇರುವ ಡಿ-ದರ್ಜೆ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುವುದು.

ಇ) ಪಶುವೈದ್ಯಾಧಿಕಾರಿಗಳಿಗೆ ಮತ್ತು ಇತರೆ ಸಿಬ್ಬಂದಿಗೆ ವಸತಿ ಗೃಹಗಳು ಇಲ್ಲದೇ ತೊಂದರೆಯಾಗಿರುವ ವಿಷಯವು ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ.

ಈ) ಉದ್ಭವಿಸುವುದಿಲ್ಲ.

ಉ) ಬಾಗೇಪಲ್ಲಿ ಗುಡಿಬಂಡೆ ತಾಲ್ಲೂಕುಗಳಲ್ಲಿರುವ ಜಾನುವಾರುಗಳ ವಿವರ ಕೆಳಕಂಡಂತಿವೆ:

ಜಾನುವಾರುಗಳು	ಬಾಗೇಪಲ್ಲಿ ತಾಲ್ಲೂಕು	ಗುಡಿಬಂಡೆ ತಾಲ್ಲೂಕು
ದನಗಳು	43527	14271
ಎಮ್ಮೆಗಳು	5411	1415

ಜಾನುವಾರುಗಳು	ಬಾಗೇಪಲ್ಲಿ ತಾಲ್ಲೂಕು	ಗುಡಿಬಂಡೆ ತಾಲ್ಲೂಕು
ಕುರಿಗಳು	79229	27737
ಮೇಕೆಗಳು	32805	9725
ಹಂದಿಗಳು	2221	682
ಒಂಟೆ	0	24
ಕುದುರೆ	9	0
ಕತ್ತೆ	52	15
ನಾಯಿ	10955	3852
ಮೊಲ	452	11
ಒಟ್ಟು	**1,74,661**	**57732**
ಕುಕ್ಕುಟಗಳು	**1,34,248**	**1,11,449**

ಹೌದು. ಬಾಗೇಪಲ್ಲಿ ಮತ್ತು ಗುಡಿಬಂಡೆ ತಾಲ್ಲೂಕುಗಳಲ್ಲಿನ ಮಿಶ್ರತಳಿ ಹಸು ಮತ್ತು ಗುಡಿಬಂಡೆ ತಾಲ್ಲೂಕುಗಳಲ್ಲಿನ ಮಿಶ್ರತಳಿ ಹಸು ಮತ್ತು ಎಮ್ಮೆಗಳಿಗೆ ಕರ್ನಾಟಕ ಸಹಕಾರ ಹಾಲು ಮಂಡಳ ನಿಯಮಿತ (ಕೆ.ಎಂ.ಎಫ್.) ಮತ್ತು ಕರ್ನಾಟಕ ಜಾನುವಾರು ಅಭಿವೃದ್ಧಿ ಸಂಸ್ಥೆಯಿಂದ ಜೀವವಿಮೆ ಮಾಡಿಸಲಾಗುತ್ತಿದೆ.

ಊ) 2010–11ನೇ ಜನವರಿ ಮಾಹೆಯವರೆಗೆ ಕರ್ನಾಟಕ ಹಾಲು ಉತ್ಪಾದಕರ ಸಹಕಾರ ಸಂಘಗಳು ಹಾಗೂ ಕರ್ನಾಟಕ ಜಾನುವಾರು ಅಭಿವೃದ್ಧಿ ಸಂಸ್ಥೆ ವತಿಯಿಂದ ಬಾಗೇಪಲ್ಲಿ ತಾಲ್ಲೂಕಿನಲ್ಲಿ ಒಟ್ಟು 1,732 ಹಾಗೂ ಗುಡಿಬಂಡೆ ತಾಲ್ಲೂಕಿನಲ್ಲಿ ಒಟ್ಟು 1,058 ಮಿಶ್ರತಳಿ ಹಸು ಮತ್ತು ಎಮ್ಮೆಗಳನ್ನು ವಿಮೆಗೆ ಒಳಪಡಿಸಲಾಗಿದೆ.